# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಅಧಿಕಾರಗಳನ್ನು ಚಲಾಯಿಸಿ ಆಡಳಿತಗಾರರ ದಿನಾಂಕ:25-05-2015 ರ ನಡವಳಿಗಳು

## ವಿಷಯದ ಸಂಖ್ಯೆ : 69 / 2015-16

**ಪ್ರಸ್ತಾವನೆ:**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನಕ್ಷೆ ಮಂಜೂರಾತಿಗೆ ಅನುಮತಿ ಪಡೆಯುವಲ್ಲಿ, ಮಂಜೂರಾತಿ ನಕ್ಷೆಗೆ ವಿರುದ್ಧವಾಗಿ ನಿರ್ಮಾಣ ಕುರಿತಂತೆ, ಪ್ರಾರಂಭಿಕ ಪ್ರಮಾಣ ಪತ್ರ, ಪಡೆಯುವಲ್ಲಿ, ಸ್ವಾಧೀನಾನುಭವ ಪ್ರಮಾಣ ಪತ್ರ ಪಡೆಯುವ ಕುರಿತಂತೆ ಸಾರ್ವಜನಿಕರಿಂದ ಪ್ರತಿದಿವಸ ಹಲವಾರು ದೂರುಗಳು ಬರುತ್ತಿದೆ. ಈ ಹಿನ್ನೆಲೆಯಲ್ಲಿ ಈ ತಕ್ಷಣ ಜಾರಿಗೆ ಬರುವಂತೆ ನಕ್ಷೆ ಮಂಜೂರಾದ ಕಟ್ಟಡ, ಪ್ರಾರಂಭಿಕ ಪ್ರಮಾಣ ಪತ್ರ, ಸ್ವಾಧೀನಾನುಭವ ಪ್ರಮಾಣ ಪತ್ರ ಮಂಜೂರಾತಿ ನೀಡಿದ ಕೂಡಲೇ ಕಟ್ಟಡ ನಕ್ಷೆ ಮತ್ತು ಪ್ರಮಾಣ ಪತ್ರಗಳನ್ನು ಪಾಲಿಕೆಯ ವೆಬ್‌ಸೈಟ್‌ನಲ್ಲಿ ಪ್ರಚುರ ಪಡಿಸುವುದರಿಂದ ಈ ಮೂಲಕ ಸಾರ್ವಜನಿಕರ ಗಮನಕ್ಕೆ ತರಬಹುದಾಗಿರುವುದರಿಂದ ಈ ಕೂಡಲೇ ಆಯುಕ್ತರು ಸೂಕ್ತ ಆದೇಶ ಹೊರಡಿಸತಕ್ಕದ್ದು.

ಈ ಪ್ರಕ್ರಿಯೆಯು ದಿನಾಂಕ:30-05-2015ರ ಒಳಗಾಗಿ ಜಾರಿಗೆ ಬರತಕ್ಕದ್ದು.

**ನಿರ್ಣಯ:** "ಪ್ರಸ್ತಾವನೆಯಲ್ಲಿರುವ ಎಲ್ಲಾ ಅಂಶಗಳನ್ನು ಕೂಲಂಕುಷವಾಗಿ ಪರಿಶೀಲಿಸಿ, ಮೇಲ್ಕಂಡ ಕ್ರಮಗಳನ್ನು ತ್ವರಿತಗತಿಯಲ್ಲಿ ಅಳವಡಿಸಿಕೊಳ್ಳಲು ಅಗತ್ಯ ಕ್ರಮಕೈಗೊಳ್ಳುವ ಸಲುವಾಗಿ 1976ರ ಕೆ.ಎಂ.ಸಿ ನಿಯಮ 43ರ ರೀತ್ಯ ನನಗೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಈ ನಿರ್ಣಯವನ್ನು ಕೈಗೊಳ್ಳಲು ತೀರ್ಮಾನಿಸಿದೆ".

(ಟಿ.ಎಂ.ವಿಜಯಭಾಸ್ಕರ್)
ಆಡಳಿತಗಾರರು